## ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 73 ಮುನೋಮು 2011

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:29.03.2011

## ಅಧಿಸೂಚನೆ

ಕನಾಟಕ ಮುದ್ರಾಂಕ ಕಾಯ್ದೆ 1957ರ (1957 ರ ಕರ್ನಾಟಕ ಕಾಯ್ದೆ 34) ಕಲಂ 9(1)(ಎ)ರನ್ವಯ ಹಾಗೂ ನೋಂದಣಿ ಕಾಯ್ದೆ 1908ರ (ಕೇಂದ್ರೀಯ ಕಾಯ್ದೆ 16) ಕಲಂ 78ರನ್ವಯ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಸಾರ್ವಜನಿಕರ ಹಿತದೃಷ್ಟಿಯಿಂದ, ಅತಿ ಸಣ್ಣ ರೈತರು, ಸಣ್ಣ ರೈತರು, ಭೂ ರಹಿತ ಕಾರ್ಮಿಕರು, ಆರ್ಥಿಕವಾಗಿ ಹಿಂದುಳಿದ ವರ್ಗದವರು ಮತ್ತು ಬಡತನ ರೇಖೆಗಿಂತ ಕೆಳಗಿನವರನ್ನು ಒಳಗೊಂಡ ಜಂಟಿ ಬಾಧ್ಯತಾ ಗುಂಪುಗಳು ಈ ಕೆಳಕಂಡ ಅಂಗೀಕೃತ ಹಣಕಾಸು ಸಂಸ್ಥೆಗಳಿಂದ ಪಡೆಯುವ ₹.5 ಲಕ್ಷ ಮಿತಿಯೊಳಗಿನ ವ್ಯವಸಾಯೇತರ ಸಾಲಗಳಿಗೆ ಸಂಬಂಧಿಸಿದಂತೆ ಬರೆದುಕೊಡುವ ದಸ್ತಾವೇಜುಗಳಿಗೆ ವಿಧಿಸಲಾಗುವ ಮುದ್ರಾಂಕ ಶುಲ್ಕ ಹಾಗೂ ನೋಂದಣಿ ಶುಲ್ಕಗಳ ಪೂರ್ಣ ವಿನಾಯಿತಿ ನೀಡಿ ಆದೇಶಿಸಿದೆ.

- ರಾಷ್ಟ್ರೀಕೃತ ಬ್ಯಾಂಕುಗಳು, ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ (ನಬಾರ್ಡ್), ವಾಣಿಜ್ಯ ಬ್ಯಾಂಕುಗಳು ಮತ್ತು ಷೆಡ್ಯೂಲ್ ಬ್ಯಾಂಕುಗಳು.
- ಸ್ಥಳೀಯ ಗ್ರಾಮೀಣ ಬ್ಯಾಂಕುಗಳು.
- ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್.
- ಪ್ರಾದೇಶಿಕ ಸಹಕಾರ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್.
- ವ್ಯವಸಾಯ ಸೇವಾ ಸಹಕಾರ ಸಂಘಗಳು.
- ವ್ಯವಸಾಯ ವಿವಿಧೋದ್ದೇಶ ಸೇವಾ ಸಹಕಾರ ಬ್ಯಾಂಕುಗಳು.
- ಕರ್ನಾಟಕ ರಾಜ್ಯ ಆಗ್ರೋ ಇಂಡಸ್ಟ್ರೀಸ್ ಕಾರ್ಪೊರೇಷನ್.
- ಕರ್ನಾಟಕ ರಾಜ್ಯ ಸರ್ಕಾರದಿಂದ ಅನುಮೋದಿತ ಹಣಕಾಸು ಸಂಸ್ಥೆಗಳು.

ಮೇಲ್ಕಂಡ ವಿನಾಯಿತಿ ಪಡೆಯಲು ಸಂಬಂಧಪಟ್ಟ ಹಣಕಾಸು ಸಂಸ್ಥೆಗಳಿಂದ ಈ ಕುರಿತು ನೀಡಲ್ಪಟ್ಟ ದೃಢೀಕೃತ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

ಈ ಆದೇಶವನ್ನು ದಿನಾಂಕ: 01-04-2011ರಿಂದ ಜಾರಿಗೆ ತರಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಟಿ.ಕೆ. ರಾಮಚಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ
(ನೋಂದಣಿ ಮತ್ತು ಮುದ್ರಾಂಕ)

ಇವರಿಗೆ: ಸಂಕಲನಕಾರರು ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ 1000 ಪ್ರತಿಗಳನ್ನು ಒದಗಿಸಲು ಕೋರಿದೆ.

—2

ಪ್ರತಿ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.
5) ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು.
6) ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ – ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರು ಹಾಗೂ ಉಪ ನಿರ್ದೇಶಕರುಗಳಿಗೆ ಈ ಆದೇಶದ ಪ್ರತಿಯನ್ನು ಕಳುಹಿಸಿಕೊಡುವಂತೆ ಕೋರಲಾಗಿದೆ.
7) ರಾಜ್ಯದ ಎಲ್ಲಾ ಜಿಲ್ಲಾ ನೋಂದಣಾಧಿಕಾರಿಗಳು / ಎಲ್ಲಾ ಉಪನೋಂದಣಾಧಿಕಾರಿಗಳು – ನೋಂದಣಿ ಮಹಾಪರಿವೀಕ್ಷಕರ ಮುಖಾಂತರ.
8) ಮಾನ್ಯ ಕಂದಾಯ / ಕೈಗಾರಿಕಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ ಬೆಂಗಳೂರು.
9) ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಇವರ ಪತ್ರಾಂಕಿತ ಆಪ್ತ ಸಹಾಯಕರು.
10) ಸರ್ಕಾರದ ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಇವರ ಅಪ್ತ ಸಹಾಯಕರು.
11) ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿಗಳು.